ಈಗಾಗಲೇ ಸನ್ಮಾನ್ಯ ಸಭಾನಾಯಕರಾದ ಮುಖ್ಯಮಂತ್ರಿಗಳು ಹೇಳಿದ ಹಾಗೆ, ಅದರ ಬಗ್ಗೆ ಒಂದು ಸಭೆಯನ್ನು ಕರೆದು ಅಚಿತಿಮ ರೂಪಕ್ಕೆ ತರುತ್ತೇವೆ. ಒಟ್ಟಾರೆ ರಾಜ್ಯದಲ್ಲಿ ಸುಮಾರು ವರ್ಷಗಳಿಂದ ಗುಡಿಸಲಿನಲ್ಲಿ ಯಾರು ವಾಸ ಮಾಡುತ್ತಿದ್ದಾರೆ ಅವರಿಗೆ ಎಲ್ಲಿಯೂ ಜಾಗವಿಲ್ಲ ಅಂಥವರಿಗೆ ಏನು ಮಾಡುತ್ತೀರಿ ಎಂದು ಕೇಳಿದರು. ಹಳ್ಳಿಗಾಡಿನ ವ್ಯಾಪ್ತಿಯಲ್ಲಿ ಬರುವ ಸಬ್‌ರಿಜಿಸ್ಟ್ರಾರ್ ಆಫೀಸ್‌ನಲ್ಲಿ ವ್ಯಾಲ್ಯೂ ಏನೂ ಇದೆ, ಒಂದು ಎಕರೆಗೆ ಒಂದು ಲಕ್ಷ ರೂಪಾಯಿಗಳಿದ್ದರೆ ಅಲ್ಲಿ ಮೂರು ಲಕ್ಷ ರೂಪಾಯಿಗಳವರೆಗೆ ಕೊಟ್ಟು ಆ ಜಮೀನನ್ನು ಪರ್ಚೇಸ್ ಮಾಡಿ ಅಲ್ಲಿ ಫಲಾನುಭವಿಗಳು ಯಾರು ಇದ್ದಾರೆ ಅವರನ್ನು ಗುರುತಿಸಲಿಕ್ಕೆ ನಾವು ಈಗಾಗಲೇ ಸೂಚನೆ ಕೊಟ್ಟಿದ್ದೇವೆ. ಪ್ರಕ್ರಿಯೆ ಪ್ರಾರಂಭವಾಗಿದೆ. ಇದು ವಿವಿಧ ಹಂತಗಳಲ್ಲಿ ನಡೆಯುತ್ತಿದೆ. ನನಗೆ ಅನ್ನಿಸುತ್ತಿದೆ ಇನ್ನು ಎಂಟು ಹತ್ತು ತಿಂಗಳಲ್ಲಿ ರಾಜ್ಯದ 224 ಕ್ಷೇತ್ರಗಳ ಪೈಕಿ 196 ಕ್ಷೇತ್ರಗಳಲ್ಲೂ ಕೂಡ ಈ ಯೋಜನೆಗೆ ಕೈಗೂಡಸತಕ್ಕಂಥ ಕೆಲಸ ಮಾಡುವುದಕ್ಕೆ ಸರ್ಕಾರ ಯೋಚನೆ ಮಾಡಿದೆ. ಇದರಲ್ಲಿ ನಾವು ಯಾವುದೇ ಕಾರಣಕ್ಕೆ ಅರ್ಹ ಫಲಾನುಭವಿಗಳಿಗೆ ಅರ್ಹತೆ ಮೇಲೆ ಕೊಡುವುದಕ್ಕೆ ಸರ್ಕಾರ ಹಿಂದೆ ಮುಂದೆ ನೋಡುವುದಿಲ್ಲ. ಸನ್ಮಾನ್ಯ ನರೇಂದ್ರ ಸ್ವಾಮಿಯವರು ಹಣ ಬಿಡುಗಡೆ ಮಾಡುವುದು ವಿಳಂಭವಾಗಿದೆ ಎಂದು ಹೇಳಿದರು. ಮೊದಲು ಅಧಿಕಾರಿಗಳು ಫಲಾನುಭವಿಗಳಿಗೆ ಹಣವನ್ನು ಕೊಡುತ್ತಿದ್ದರು. ನಾವು ಈ ಸಾರಿ ಮೊದಲನೆ ಬಾರಿಗೆ GPS ಮಾಡಿ ಯಾರು ಫಲಾನುಭವಿ ಇದ್ದಾರೆ ಅವರ ಹೆಸರಿಗೆ ಹಣವನ್ನು ಕೊಡುತ್ತಿದ್ದೇವೆ. ಎಲ್ಲೆಲ್ಲಿ ಫೌಂಡೇಷನ್ ಹಾಕಿದ್ದಾರೆ ಅಂಥ ಕಡೆಗಳಲ್ಲಿ ನಾವು ಮೂರು ಹಂತಗಳಲ್ಲಿ ಹಣವನ್ನು ಬಿಡುಗಡೆ ಮಾಡುತ್ತಿದ್ದೇವೆ. ಮೊದಲನೆ ಹಂತ ಇಪ್ಪತ್ತು ಸಾವಿರ ತದನಂತರ ಹದಿನೈದು ಸಾವಿರ ರೂಪಾಯಿ ಈ ರೀತಿಯಾಗಿ ಬಿಡುಗಡೆ ಮಾಡುತ್ತಿದ್ದೇವೆ. ತಮ್ಮ ಕ್ಷೇತ್ರದಲ್ಲಿ ಏನಾದರೂ ಇದ್ದರೆ ಕೊಡಿ. ಆದರೆ ಒಂದು ಸತ್ಯ ಹಣಕ್ಕೆ ತೊಂದರೆಯಿಲ್ಲ. ಮೊದಲು ಅಧಿಕಾರಿಗಳ ಕೈಗೆ ಹಣ ಕೊಟ್ಟು ಎಲ್ಲೋ ಒಂದು ಕಡೆಗೆ ಯಾರೋ ಮಾಡಿದ ಪಾಪಕ್ಕೆ ಸರ್ಕಾರವನ್ನು ದೋಷಣೆ ಮಾಡುವಂಥ ಸ್ಥಿತಿ ಏನು ಇತ್ತು ಅದನ್ನು ತಪ್ಪಿಸಬೇಕೆಂದು ಆಯಾಯ ಫಲಾನುಭವಿಗಳ ಹೆಸರಿನಲ್ಲಿ ಜಿರೋ ಅಕೌಂಟ್ ಮಾಡಿ ನೇರವಾಗಿ ಅವರಿಗೆ ಹಣವನ್ನು ಬಿಡುಗಡೆ ಮಾಡುತ್ತಿದ್ದೇವೆ.

(6) ವರದಿಯನ್ನೊಪ್ಪಿಸುವುದು

ಶ್ರೀ ಶ್ರೀಕಾಂತ ಕುಲಕರ್ಣಿ (ಜಮಖಂಡಿ):– ಮಾನ್ಯ ಅಧ್ಯಕ್ಷರೆ, ದಿನಾಂಕ 09–07–2010 ರಂದು ಸದನವನ್ನು ಮುಂದೂಡಿದ ನಂತರ ವಿಧಾನ ಸಭೆಯ

ಸಭಾಂಗಣದಲ್ಲಿ ನಡೆದ ಅಹಿತಕರ ಘಟನೆಗೆ ಸಂಬಂಧಿಸಿದಂತೆ ಸದನ ಸಮಿತಿಯ ವರದಿಯನ್ನು ಸಮಿತಿಯ ಪರವಾಗಿ ನಾನು ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

(7) ಶಾಸನ ರಚನೆ
ವಿಧೇಯಕಗಳನ್ನು ಮಂಡಿಸುವುದು
ಕರ್ನಾಟಕ ಸಚಿವರುಗಳ ಸಂಬಳಗಳು ಮತ್ತು ಭತ್ಯೆಗಳ(ತಿದ್ದುಪಡಿ) ವಿಧೇಯಕ, 2011 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಸಚಿವರುಗಳ ಸಂಬಳಗಳು ಮತ್ತು ಭತ್ಯೆಗಳ(ತಿದ್ದುಪಡಿ)ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ಸಚಿವರುಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಸಚಿವರುಗಳ ಸಂಬಳಗಳ ಮತ್ತು ಭತ್ಯೆಗಳ(ತಿದ್ದುಪಡಿ)ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–III)